ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು).—''೧೯೯೪ರ ಕರ್ನಾಟಕ ಸರಕಾರಗಳ ಪ್ರವೇಶದ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.''

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೯೪ರ ಕರ್ನಾಟಕ ಸರಕಾರಗಳ ಪ್ರವೇಶದ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು

೪. ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕ ೧೯೯೪

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ''೧೯೯೪ರ ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ''

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೯೪ರ ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ರಿಂದ ೮ರ ವರೆಗೆ :—

ಅಧ್ಯಕ್ಷರು.—''ಖಂಡ ೨ರಿಂದ ೮ರ ವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ರಿಂದ ೮ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ :—

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗಭಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಪ್ರಥಮ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ''೧೯೯೪ರ ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.''

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೯೪ರ ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿತು